## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುವ ಅತಿಥಿ ಶಿಕ್ಷಕರ / ಅತಿಥಿ ಉಪನ್ಯಾಸಕರ ಗೌರವ ಸಂಭಾವನೆಯನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** 1.ಸರ್ಕಾರದ ಆದೇಶ ಸಂಖ್ಯೆ: ಇಡಿ 208 ಡಿಜಿಡಿ 2016, ದಿನಾಂಕ:14.03.2017.

2. ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್ಇಎಸ್ 2022, ದಿನಾಂಕ:18/06/2022.

3.ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ4(1) ಸ.ಪ್ರೌ.ಶಾ.ಅ.ಶಿ.ನೇ.01/2023-24, ದಿನಾಂಕ: 10.10.2023.

4.ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 341 ವೆಚ್ಚ-8 2025ರ, ದಿನಾಂಕ:11.04.2025 ರಲ್ಲಿ Budget Advice.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ ಅತಿಥಿ ಶಿಕ್ಷಕರಾಗಿ ನೇಮಕ ಮಾಡಿಕೊಂಡು ಕಾರ್ಯ ನಿರ್ವಹಿಸಲಾದ ಅತಿಥಿ ಶಿಕ್ಷಕರ ಗೌರವ ಸಂಭಾವನೆಯನ್ನು ಅನುಕ್ರಮವಾಗಿ ರೂ.7500/- ಮತ್ತು ರೂ.8000/- ಗಳಿಗೆ ನಿಗಧಿಪಡಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ಆದೇಶದಲ್ಲಿ ಸದರಿ ಗೌರವ ಸಂಭಾವನೆಯನ್ನು ಪರಿಷ್ಕರಿಸಿ ಸರ್ಕಾರಿ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರುಗಳಿಗೆ ರೂ.10000/- ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿನ ಅತಿಥಿ ಶಿಕ್ಷಕರುಗಳಿಗೆ ರೂ.10,500/- ಗಳ ಗೌರವ ಸಂಭಾವನೆಯನ್ನು ನಿಗಧಿಪಡಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ದಿನಾಂಕ:10.10.2023 ರ ಪತ್ರದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವ ಅತಿಥಿ ಶಿಕ್ಷಕರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಗೌರವ ಸಂಭಾವನೆಯನ್ನು ಹೆಚ್ಚಳ ಮಾಡಿ ಪರಿಷ್ಕರಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

K.E.

2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ ರಾಜ್ಯದ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಅತಿಥಿ ಶಿಕ್ಷಕರು / ಅತಿಥಿ ಉಪನ್ಯಾಸಕರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ತಲಾ ರೂ.2000/- (ಎರಡು ಸಾವಿರ ರೂಪಾಯಿಗಳು ಮಾತ್ರ) ಹೆಚ್ಚಿಸಲು ಮೇಲೆ (4) ರಲ್ಲಿ ಓದಲಾದ Budget Advice ನಲ್ಲಿ ಆರ್ಥಿಕ ಇಲಾಖೆಯ ಅನುಷ್ಠಾನಗೊಳಿಸಲು ತಿಳಿಸಲಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಎಸ್‌ಇಎಸ್ 2025,</u>**
**<u>ಬೆಂಗಳೂರು, ದಿನಾಂಕ:15.05.2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆ / ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನೇಮಕಾತಿ ಮಾಡಿಕೊಳ್ಳಲಾಗುತ್ತಿರುವ ಅತಿಥಿ ಶಿಕ್ಷಕರು / ಅತಿಥಿ ಉಪನ್ಯಾಸಕರುಗಳ ಗೌರವ ಸಂಭಾವನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಲಾಗಿದೆ.

| ಕ್ರ. ಸಂ | ಶಾಲೆಗಳ ವಿವರ | ಹಾಲಿ ನೀಡಲಾಗುತ್ತಿರುವ ಗೌರವ ಸಂಭಾವನೆ (ರೂ/-ಗಳಲ್ಲಿ) | ಹೆಚ್ಚಳ ಮಾಡಲಾಗಿರುವ ಗೌರವ ಸಂಭಾವನೆ (ರೂ/-ಗಳಲ್ಲಿ) | ಒಟ್ಟು ಗೌರವ ಸಂಭಾವನೆ (ರೂ/-ಗಳಲ್ಲಿ) |
|---|---|---|---|---|
| 1. | ಸರ್ಕಾರಿ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ | ರೂ.10,000/- | ರೂ.2000/- | ರೂ.12,000/- (ಹನ್ನೆರಡು ಸಾವಿರ ರೂಪಾಯಿಗಳು ಮಾತ್ರ) |
| 2. | ಸರ್ಕಾರಿ ಪ್ರೌಢಶಾಲಾ ಅತಿಥಿ ಶಿಕ್ಷಕರಿಗೆ | ರೂ.10,500/- | ರೂ.2000/- | ರೂ.12,500/- (ಹನ್ನೆರಡು ಸಾವಿರದ ಐದು ನೂರು ರೂಪಾಯಿಗಳು ಮಾತ್ರ) |
| 3. | ಸರ್ಕಾರಿ ಪದವಿಪೂರ್ವ ಕಾಲೇಜು ಅತಿಥಿ ಉಪನ್ಯಾಸಕರು | ರೂ.12,000/- | ರೂ.2000/- | ರೂ.14,000/- (ಹದಿನಾಲ್ಕು ಸಾವಿರ ರೂಪಾಯಿಗಳು ಮಾತ್ರ) |

K. E. ಶೆಟ್ಟಿ

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 351 ವೆಚ್ಚ-8/2025 ದಿನಾಂಕ: 28.04.2025 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

15/5/25

(ಪ್ರಕಾಶ ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (ಎ & ಇ), ಕರ್ನಾಟಕ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು (ಪದವಿ ಪೂರ್ವ), ಶಾಲಾ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ.
6. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು (ಪ್ರೌಢಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
8. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯುಕ್ತರ ಮೂಲಕ)
9. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ (ಆಯುಕ್ತರ ಮೂಲಕ).